156 ನೆ = (75)
4RK
3112

## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್. ರವಿಕುಮಾರ್ ರವರು ನಿಯಮ 72ರ ಅಡಿಯಲ್ಲಿ ಕೇಳಲಾದ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಹೇಳಿಕೆ.**

**ಸೂಚನೆ: 15ನೇ ಹಣಕಾಸು ಯೋಜನೆಯಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮೂಲಕ ಗ್ರಾಮ ಪಂಚಾಯತಿಗಳಿಗೆ 90% ಜನಸಂಖ್ಯೆ 10% ವಿಸ್ತೀರ್ಣದ ಆಧಾರದ ಮೇಲೆ ನಿರ್ಬಂಧಿತ ಹಾಗೂ ಅನಿರ್ಬಂಧಿತ ಅನುದಾನವೆಂಬುದಾಗಿ ಎರಡು ವಿಭಾಗಗಳನ್ನು ಮಾಡಿ ಕೇಂದ್ರ ಸರ್ಕಾರದ ಅನುದಾನದ ಹಂಚಿಕೆಗೆ ಅನುಗುಣವಾಗಿ 15ನೇ ಹಣಕಾಸು ಆಯೋಗದ ಮಾನದಂಡದಂತೆ ಪ್ರತೀ ಗ್ರಾಮ ಪಂಚಾಯತಿಗಳು ತಯಾರಿಸಿರುವ ಕ್ರಿಯಾಯೋಜನೆಗೆ ಅನುಗುಣವಾಗಿ ಗ್ರಾಮ ಪಂಚಾಯತಿಗಳಿಗೆ ಅನುದಾನ ಹಂಚಿಕೆಯಾಗುತ್ತದೆ. ಆದರೆ, 2023-24 ಹಾಗೂ 2024-25ನೇ ಸಾಲಿನಲ್ಲಿ ಗ್ರಾಮ ಪಂಚಾಯತಿಗಳು ಸಲ್ಲಿಸಿರುವ ಕ್ರಿಯಾಯೋಜನೆಗೆ ಅನುಗುಣವಾಗಿ ಅನುದಾನ ಹಂಚಿಕೆ ಮಾಡದೇ ಹಲವು ಗ್ರಾಮ ಪಂಚಾಯತಿಗಳಿಗೆ ಹೆಚ್ಚಿಗೆ ಹಾಗೂ ಹಲವಾರು ಗ್ರಾಮ ಪಂಚಾಯತಿಗಳಿಗೆ ಕಡಿಮೆ ಅನುದಾನ ಹಂಚಿಕೆ ಮಾಡಿರುವ ಪ್ರಯುಕ್ತ ಗ್ರಾಮ ಪಂಚಾಯತಿಗಳ ಕಾಮಗಾರಿಗಳ ಪ್ರಗತಿ ಕುಂಠಿತವಾಗಿರುತ್ತದೆ. ನನ್ನ ಪ್ರವಾಸ ಸಂದರ್ಭದಲ್ಲಿ ಭೇಟಿ ನೀಡಿರುವ ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಸದರಿ ವಿಷಯ ಪ್ರಸ್ತಾಪಿತಗೊಂಡಿರುವ ಕಾರಣ ಅನುದಾನದ ತಾರತಮ್ಯದ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯಬಯಸುತ್ತೇನೆ.**

**ಉತ್ತರ:** 2024-25ನೇ ಸಾಲಿಗೆ 15ನೇ ಹಣಕಾಸು ಆಯೋಗದ ಅನುದಾನದಲ್ಲಿ ಒಟ್ಟು ರೂ.2637.00 ಕೋಟಿಗಳನ್ನು ನಿಗಧಿಪಡಿಸಿದ್ದು, ಇದರಲ್ಲಿ ಗ್ರಾಮ ಪಂಚಾಯಿತಿಗಳಿಗೆ ಶೇ.85ರಷ್ಟು ಅಂದರೆ ರೂ.2241.45 ಕೋಟಿಗಳನ್ನು ನಿಗದಿಪಡಿಸಲಾಗಿರುತ್ತದೆ. ಈ ಅನುದಾನವನ್ನು ಶೇ.90ರಷ್ಟು ಜನಸಂಖ್ಯೆಯ ಆಧಾರದ ಮೇಲೆ ಶೇ.10ರಷ್ಟು ಭೌಗೋಳಿಕ ವಿಸ್ತೀರ್ಣದ ಆಧಾರದ ಮೇಲೆ ಹಂಚಿಕೆ ಮಾಡಲಾಗಿರುತ್ತದೆ.

ಅನುದಾನದ ಹಂಚಿಕೆಗೆ ಅನುಗುಣವಾಗಿ ಗ್ರಾಮ ಪಂಚಾಯತಿಗಳು ಯೋಜನೆಯ ಮಾರ್ಗಸೂಚಿಗಳಂತೆ ಕ್ರಿಯಾಯೋಜನೆ ತಯಾರಿಸಬೇಕಿರುತ್ತದೆ.

2023-24ನೇ ಸಾಲಿನಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಹಳ್ಳಿಗಳ ಸೇರ್ಪಡೆ ಮತ್ತು ವಿಭಜನೆ, ವರ್ಗಾವಣೆಗಾಗಿ ಸ್ವೀಕೃತವಾದ ಮನವಿಗಳನ್ನು ಪರಿಗಣಿಸಿ ಅನುದಾನದ ಹಂಚಿಕೆಯನ್ನು ಪರಿಷ್ಕರಿಸಿ ಮರುಹಂಚಿಕೆ ಮಾಡಲಾಗಿರುತ್ತದೆ. 2024-25ನೇ ಸಾಲಿನ ಅನುದಾನವನ್ನು ಹಂಚಿಕೆ ಮಾಡುವ ಸಂದರ್ಭದಲ್ಲಿ ತಾಂತ್ರಿಕ ದೋಷದಿಂದಾಗಿ ಕೆಲವು ಗ್ರಾಮ ಪಂಚಾಯತಿಗಳ ಜನಸಂಖ್ಯೆಯು ದ್ವಿಗುಣವಾಗಿ ತೋರಿಸಿರುತ್ತದೆ. ಇದರಿಂದಾಗಿ ಗ್ರಾಮ ಪಂಚಾಯತಿಗಳಿಗೆ ಅನುದಾನ ಹಂಚಿಕೆಯಲ್ಲಿ ವ್ಯತ್ಯಾಸವಾಗಿದ್ದು, ತಕ್ಷಣವೇ ದೋಷವನ್ನು ಸರಿಪಡಿಸಿ, ಪರಿಷ್ಕೃತ ಅನುದಾನ ಹಂಚಿಕೆಯ ಬಗ್ಗೆ ಪತ್ರ ಹೊರಡಿಸಲಾಗಿರುತ್ತದೆ ಮತ್ತು ಪರಿಷ್ಕೃತ ಹಂಚಿಕೆಯ ಅನುಸಾರ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

2024-25ನೇ ಸಾಲಿನಲ್ಲಿ 15ನೇ ಹಣಕಾಸು ಆಯೋಗ ಅನುದಾನದ ಎರಡನೇ ಕಂತಿನ ನಿರ್ಬಂಧಿತ ಅನುದಾನ ರೂ.64.88 ಕೋಟಿಗಳು ಮತ್ತು ಅನಿರ್ಬಂಧಿತ ಅನುದಾನ ರೂ.43.32 ಕೋಟಿಗಳು ಕೇಂದ್ರ ಸರ್ಕಾರದಿಂದ ಕಡಿಮೆ ಬಿಡುಗಡೆಯಾಗಿರುವುದರಿಂದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೂ ಕಡಿಮೆ ಅನುದಾನ ಹಂಚಿಕೆಯಾಗಿರುತ್ತದೆ.

**ಸಂಖ್ಯೆ:ಗ್ರಾಅಪಂರಾ 148 ಜಿಪಸ 2025**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.